# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 04.06.2025ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2025ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು :**

| | | | |
|---|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ಕವಿತಾ ಕೆ.ಆರ್.<br>ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಪರಿಣಿತ<br>ಡೀನರು, ಕಲಾ ನಿಕಾಯ | ಸದಸ್ಯರು | |
| 4. | ಡಾ. ಎಸ್.ಬಿ.ಎಂ. ಪ್ರಸನ್ನ | ಸದಸ್ಯರು | |
| 5. | ಡಾ. ಕೆ.ಸಿ. ಮಹದೇಶ | ಸದಸ್ಯರು | |
| 6. | ಡಾ. ಶಂಕರಮೂರ್ತಿ ಎಚ್.ಕೆ. | ಸದಸ್ಯರು | |
| 7. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 8. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು | |
| 9. | ಶ್ರೀ ರಘುರಾಜ್ | ಸದಸ್ಯರು | |
| 10. | ಶ್ರೀ ಅಚ್ಚುತ ಗಟ್ಟಿ | ಸದಸ್ಯರು | |
| 11. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು | ಆನ್‌ಲೈನ್ ಮೂಲಕ |
| 12. | ಶ್ರೀಮತಿ ಪುಷ್ಪಲತಾ ಹೆಚ್.ಕೆ.<br>ಪ್ರಾಂಶುಪಾಲರು, ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ,<br>(**ಶಾಲಾ ಶಿಕ್ಷಣ ಮತ್ತು ಸಾಕ್ಷರತೆ** ಆಯುಕ್ತರ ಪರವಾಗಿ) | ಸದಸ್ಯರು | |
| 13. | ಪ್ರೊ. ಹೆಚ್. ದೇವೇಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 14. | ಪ್ರೊ. ಸಂಗಪ್ಪ ವೈ.<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು | |
| 15. | ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ | |

**ಅನುಪಸ್ಥಿತರು:**

| | | |
|---|---|---|
| 1. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು |
| 2. | ಡಾ. ಸಂದೇಶ್ ಕೆ.ಎಸ್.<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು |

## ಪ್ರಾರಂಭಿಕ

**ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.**

**ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.**

### I. ನಡವಳಿಗಳ ದೃಢೀಕರಣ

**1) ದಿನಾಂಕ 09.05.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

**ತಿದ್ದುಪಡಿ ನಿರ್ಣಯ:**

**1)** ಕಾರ್ಯಸೂಚಿ ಸಂಖ್ಯೆ:ಸಿಂಡಿಕೇಟು:ಸಾ.ಸ.3:9(2025)ರ ನಿರ್ಣಯಕ್ಕೆ ಸಂಬಂಧಿಸಿದಂತೆ, ಅಧ್ಯಯನ ಮಂಡಳಿಗಳ ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಿರುವ ಬಗ್ಗೆ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಮತ್ತು ಡಾ.ಎಸ್.ಬಿ.ಎಂ. ಪ್ರಸನ್ನ ಇವರ ಆಕ್ಷೇಪಣೆ ಸಲ್ಲಿಸಿದ್ದು ಇನ್ನು ಮುಂದಕ್ಕೆ ಅಧ್ಯಯನ ಮಂಡಳಿಯ ರಚನೆಯನ್ನು ಸಿಂಡಿಕೇಟು ಸಭೆಯಲ್ಲಿಯೇ ರಚಿಸುವಂತೆ Dissent Note ನೀಡಿರುತ್ತಾರೆ.

**2)** ಕಾರ್ಯಸೂಚಿ ಸಂಖ್ಯೆ:ಸಾರ್ವತ್ರಿಕ:ಸಾ.ಸ.3:13(2025)ಕ್ಕೆ ಸಂಬಂಧಿಸಿ, ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಮತ್ತು ಡಾ.ಎಸ್.ಬಿ.ಎಂ. ಪ್ರಸನ್ನ ಇವರ ಆಕ್ಷೇಪಣೆ ಮೇರೆಗೆ ವಾರ್ಷಿಕ ವರದಿ 2023-24ನ್ನು ಅನುಮೋದಿಸದೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು ಹಾಗೂ ಸದಸ್ಯರಿಗೆ ವಾರ್ಷಿಕ ವರದಿಯ ಭೌತಿಕ ಪ್ರತಿಯನ್ನು ಸಭೆಯಲ್ಲಿ ನೀಡಲಾಯಿತು.

**3)** ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.3:3(2025)ಕ್ಕೆ ಸಂಬಂಧಿಸಿ, ಮಹಿಳಾ ಅತಿಥಿ ಉಪನ್ಯಾಸಕರಿಗೆ ವೇತನ ಸಹಿತ ಮಾತೃತ್ವ ರಜೆ ನೀಡುವ ಬಗ್ಗೆ ಸರ್ಕಾರಕ್ಕೆ ಪತ್ರ ಬರೆಯಲು ನಿರ್ಣಯಿಸಲಾಯಿತು.

**4)** ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.3:22(2025)ಕ್ಕೆ ಸಂಬಂಧಿಸಿ, ಆರ್ಥಿಕ ಇಲಾಖೆಯ ಸೂಚನೆ ಮೇರೆಗೆ ರಾಜ್ಯ ಬಜೆಟ್ ಮಂಡನೆಯಾದ ನಂತರ ವಿಶ್ವವಿದ್ಯಾನಿಲಯದ 2025-26ನೇ ಸಾಲಿನ ಆಯವ್ಯಯ ಅಂದಾಜು ಪಟ್ಟಿಯನ್ನು ಮಂಡಿಸಿ ಅನುಮೋದನೆ ಪಡೆಯಲಾಗಿತ್ತು. ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಎಸ್.ಬಿ.ಎಂ.

ಪ್ರಸನ್ನ ಇವರು ಇನ್ನು ಮುಂದೆ ಆಯವ್ಯಯವನ್ನು ಮುಂಚಿತವಾಗಿ ತಯಾರು ಮಾಡಿ ಮಾರ್ಚ್ ತಿಂಗಳೊಳಗಾಗಿ ಸಿಂಡಿಕೇಟಿನ ಅನುಮೋದನೆ ಪಡೆದುಕೊಳ್ಳಲು ನೀಡಿದ ಸಲಹೆಯನ್ನು ಒಪ್ಪಿ ಈ ಬಗ್ಗೆ ಹಣಕಾಸು ಅಧಿಕಾರಿಯವರು ಸೂಕ್ತ ಕ್ರಮ ವಹಿಸಲು ನಿರ್ಣಯಿಸಲಾಯಿತು.

- **ಉಳಿದಂತೆ ದೃಢೀಕರಿಸಲಾಯಿತು -**

**II. ಅನುಸರಣಾ ವರದಿಯ ಅನುಮೋದನೆ**

**1) ದಿನಾಂಕ 12.03.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

1) ಕಾರ್ಯಸೂಚಿ ಸಂಖ್ಯೆ ಪರೀಕ್ಷಾಂಗ:ಸಾ.ಸ.2:2(2025)ಕ್ಕೆ ಸಂಬಂಧಪಟ್ಟಂತೆ, ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಮತ್ತು ಡಾ.ಎಸ್.ಬಿ.ಎಂ. ಪ್ರಸನ್ನ ಇವರ ಸಲಹೆಯಂತೆ ಎಲ್ಲಾ ಪದವಿ ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳನ್ನು ದಿನಾಂಕ 25.06.2025ರೊಳಗೆ ನೀಡಲು ಕ್ರಮಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಲಾಯಿತು.

**2)** ಕಾರ್ಯಸೂಚಿ ಸಂಖ್ಯೆ ಡಿಇವಿ:ಸಾ.ಸ.2:11(2025)ಕ್ಕೆ ಸಂಬಂಧಪಟ್ಟಂತೆ, ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಮತ್ತು ಡಾ.ಎಸ್.ಬಿ.ಎಂ. ಪ್ರಸನ್ನ ಇವರಿಗೆ ಒಡಂಬಡಿಕೆ ಪ್ರತಿಯನ್ನು ನೀಡಲು ನಿರ್ಣಯಿಸಲಾಯಿತು.

**3)** ಇತರ ವಿಷಯ-3ಕ್ಕೆ ಸಂಬಂಧಿಸಿ, ಆಂತರಿಕ ಲೆಕ್ಕ ಪರಿಶೋಧನೆಗೆ ಸಿಬ್ಬಂದಿ ನೇಮಕಾತಿ ಮಾಡುವ ಬಗ್ಗೆ ಅಲ್ಪಾವಧಿ ಇ-ಟೆಂಡರ್ ಆಹ್ವಾನಿಸಿದ್ದರೂ ಯಾವುದೇ ಬಿಡ್ಡುದಾರರು ಬಿಡ್ ಮಾಡದಿರುವುದರಿಂದ ಮತ್ತೊಮ್ಮೆ ದಿನಾಂಕ 23.05.2025ರಂದು ಅಲ್ಪಾವಧಿ Manual ಟೆಂಡರ್ ಕರೆಯಲಾಗಿದೆ.

ಯಾವುದೇ ಸಂದರ್ಭದಲ್ಲಿ ಬಿಡ್ಡುದಾರರು ಭಾಗವಹಿಸದಿದ್ದಲ್ಲಿ, ಈಗಾಗಲೇ ಮಾನ್ಯ ಸಿಂಡಿಕೇಟು ಅನುಮೋದನೆ ನೀಡಿರುವುದರಿಂದ ವಿಶ್ವವಿದ್ಯಾನಿಲಯ ನೆಲೆಯಲ್ಲಿ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**- ಉಳಿದಂತೆ ಅನುಮೋದಿಸಲಾಯಿತು –**

2) **ಘಟಿಕೋತ್ಸವದ ಪೂರ್ವಭಾವಿಯಾಗಿ ದಿನಾಂಕ 28.03.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

**- ಅನುಮೋದಿಸಲಾಯಿತು –**

**III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.4:1(2025)

ವಿಷಯ: ಮಹಾತ್ಮ ಗಾಂಧಿ ಮೆಮೋರಿಯಲ್ ಕಾಲೇಜು, ಉಡುಪಿ ವಿದ್ಯಾಸಂಸ್ಥೆಗೆ ಸ್ವಾಯತ್ತ ಸ್ಥಾನಮಾನ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.4:2(2025)

ವಿಷಯ: ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಸ್ನಾತಕ ಕಾರ್ಯಕ್ರಮಗಳ ಪ್ರವೇಶಾತಿ ಹಾಗೂ ಸರ್ಟಿಫಿಕೇಟುಗಳ ಶುಲ್ಕಗಳನ್ನು ಪರಿಷ್ಕರಿಸಿ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಮತ್ತು ಡಾ.ಎಸ್.ಬಿ.ಎಂ. ಪ್ರಸನ್ನ ಇವರು ವಿಶ್ವವಿದ್ಯಾನಿಲಯದ ಹಿತದೃಷ್ಟಿಯಿಂದ ಬಿ.ಎ./ಬಿ.ಎಸ್ಸಿ./ಬಿ.ಕಾಂ. ಕೋರ್ಸುಗಳನ್ನು ಉಳಿಸಿಕೊಳ್ಳುವ ದೃಷ್ಟಿಯಿಂದ ಶುಲ್ಕ ಪರಿಷ್ಕರಣೆಯನ್ನು 50% ಹೆಚ್ಚಿಸುವುದಕ್ಕೆ ತಮ್ಮ ಸಹಮತ ಇಲ್ಲವೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಉಳಿದ ಸದಸ್ಯರಾದ ಶ್ರೀ ಸುರೇಶ್ ಕುಮಾರ್ ನಾವೂರು, ಶ್ರೀ ರಘುರಾಜ್, ಶ್ರೀ ಅಚ್ಚುತ ಗಟ್ಟಿ ಮತ್ತು ಶ್ರೀಮತಿ ಜೂಡಿತ್ ಮೆಂಡೋನ್ಸ ಇವರೆಲ್ಲರೂ ವಿಶ್ವವಿದ್ಯಾನಿಲಯದ ಆರ್ಥಿಕ ಹಿತದೃಷ್ಟಿಯಿಂದ ಮತ್ತು ಮೇಲಿನ ಕೋರ್ಸುಗಳನ್ನು ಮುಂದುವರಿಸಿಕೊಂಡು ಹೋಗುವ ಅನಿವಾರ್ಯತೆ ಇರುವುದರಿಂದ ಕಾರ್ಯಸೂಚಿಗೆ ತಮ್ಮ ಸಹಮತವನ್ನು ಸೂಚಿಸಿದ ಹಿನ್ನೆಲೆಯಲ್ಲಿ ಅನುಮೋದಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ: ಸಾ.ಸ.4:3(2025) |
| ವಿಷಯ: | ಟೆಂಡರ್ ಸಮಿತಿ ಹಾಗೂ ಟೆಂಡರ್ ಪರಿಶೀಲನಾ ಸಮಿತಿಯ ಕಾರ್ಯ ವ್ಯಾಪ್ತಿಯಲ್ಲಿ ಎಲ್-1 ಮತ್ತು ಎಲ್-2 ಪರಿಗಣಿಸುವ ನಿಟ್ಟಿನಲ್ಲಿ ಕೆ.ಟಿ.ಪಿ.ಪಿ. ACT ಪ್ರಕಾರ ಕ್ರಮ ಕೈಗೊಳ್ಳುವ ಬಗ್ಗೆ. |
| **ನಿರ್ಣಯ:** | ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಪ.ಜಾ.ಪ.ಪಂ.ಘಟಕ : ಸಾ.ಸ.4:4(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಕೇಂದ್ರ ಸರಕಾರದಿಂದ ಹೊಸದಾಗಿ ನಿರ್ಮಾಣಗೊಂಡ ಪರಿಶಿಷ್ಠ ಜಾತಿ / ಪಂಗಡದ ವಿದ್ಯಾರ್ಥಿನಿಯರ ವಸತಿನಿಲಯದ ನಿರ್ವಹಣೆಯನ್ನು ಸಮಾಜ ಕಲ್ಯಾಣ ಇಲಾಖೆಗೆ ವಹಿಸುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು: ಸಾ.ಸ.4:5(2025) |
| ವಿಷಯ: | ಶ್ರೀ ಕೆ.ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 2 : | ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ವಿಶ್ವಮಂಗಳ ಶಿಕ್ಷಣ ಸಂಸ್ಥೆಯು ವಿಶ್ವವಿದ್ಯಾನಿಲಯದ ಆಡಳಿತಕ್ಕೊಳಪಟ್ಟಿದೆಯೇ ಅಥವಾ ಸ್ವತಂತ್ರವಾಗಿ ಕಾರ್ಯ ನಿರ್ವಹಿಸುತ್ತಿದೆಯೋ ಎಂಬುದರ ಬಗ್ಗೆ ಸ್ಪಷ್ಟನೆ ಇಲ್ಲ. ವಿಶ್ವಮಂಗಳ ವಿದ್ಯಾ ಸಂಸ್ಥೆಯು 1960ರ ಸಂಘ ಸಂಸ್ಥೆಗಳ ನೋಂದಣಿ ನಿಯಮದಂತೆ ನೋಂದಣಿಯಾಗಿರುವ ಸಂಸ್ಥೆಯಾಗಿರುತ್ತದೆ. ಈ ಸಂಸ್ಥೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ, ಕುಲಸಚಿವರು, ಹಣಕಾಸು ಅಧಿಕಾರಿಗಳು, ಮುಖ್ಯ ಕಾರ್ಯಕಾರಿ ಅಭಿಯಂತರರು, ಪ್ರೊಫೆಸರುಗಳು, ಪ್ರಾಧ್ಯಾಪಕರುಗಳು ಹಾಗೂ ಶಿಕ್ಷಕೇತರ ಸಿಬ್ಬಂದಿಗಳು ಈ ಸಂಸ್ಥೆಯ ಸದಸ್ಯರು ಪದಾಧಿಕಾರಿಗಳಾಗಿರುತ್ತಾರೆ ಎಂಬುದು ಸಂಘದ ಬೈಲಾದಲ್ಲಿ ಕಂಡು ಬರುತ್ತದೆ ಹಾಗೂ ಇದು ಒಂದು ನೋಂದಾಯಿತ ಸ್ವತಂತ್ರ ಸಂಸ್ಥೆಯಾಗಿರುತ್ತದೆ ಹಾಗೂ ವಿದ್ಯಾರ್ಥಿಗಳಿಂದ ಡೊನೇಷನ್ ಪಡೆದುಕೊಂಡು ತರಗತಿ ನಡೆಸುವ ಸಂಸ್ಥೆಯಾಗಿರುತ್ತದೆ. ಈ ಸಂಸ್ಥೆಯು ಮಂಗಳೂರು ವಿಶ್ವವಿದ್ಯಾನಿಲಯದ ಜಮೀನಿನಲ್ಲಿ ವಿಶ್ವವಿದ್ಯಾನಿಲಯದ ಕಟ್ಟಡದಲ್ಲಿ ಕಾರ್ಯನಿರ್ವಹಿಸುವುದರಿಂದ ಇದು ವಿಶ್ವವಿದ್ಯಾನಿಲಯದ ಆಡಳಿತಕ್ಕೊಳಪಡುತ್ತದೆಯೋ ಇಲ್ಲವೋ ಎಂಬುದರ ಬಗ್ಗೆ ಮಾಹಿತಿಗಾಗಿ ಪ್ರಸ್ತಾವನೆ. |

**ನಿರ್ಣಯ:** ವಿಶ್ವಮಂಗಳ ಎಜ್ಯುಕೇಶನ್ ಸೊಸೈಟಿಗೆ ಸಂಬಂಧಿಸಿದಂತೆ ಸದರಿ ಸಂಸ್ಥೆಯಿಂದ ಕೋರಲಾದ ದಾಖಲೆಗಳು ದೊರೆತ ನಂತರ ಎಲ್ಲಾ ವಿವರಗಳನ್ನು ಕ್ರೋಢಿಕರಿಸಿ ಸಿಂಡಿಕೇಟಿಗೆ ಮಂಡಿಸಲು ನಿರ್ಣಯಿಸಲಾಯಿತು.

ವಿಷಯ 3 : ತಾ.17-2-2025 ರಂದು ನಡೆದ ವಾರ್ಷಿಕ ಮಹಾಸಭೆಯಲ್ಲಿ ಬೈಲಾ ಪ್ರಕಾರ ಹೊಸ ಆಡಳಿತ ಸಮಿತಿ ರಚನೆ ಆಗಿಲ್ಲ ಎಂಬುದಾಗಿ ತಿಳಿದು ಬಂದಿರುವುದರಿಂದ ಮತ್ತು ಸ್ವತಂತ್ರ ಸಂಸ್ಥೆಯಾಗಿರುವುದರಿಂದ ಪಂಚಾಯತ್ ರಾಜ್ ಪ್ರಕರಣ 58 ಹಾಗೂ 199ರನ್ವಯ ಗ್ರಾಮ ಪಂಚಾಯತ್‌ಗೆ ಕಡ್ಡಾಯವಾಗಿ ತೆರಿಗೆ ಪಾವತಿಸಬೇಕಾಗುತ್ತದೆ. ಈ ಬಗ್ಗೆ ಮಾಹಿತಿ ನೀಡುವುದಕ್ಕೆ ಪ್ರಸ್ತಾವನೆಗಳು.

**ನಿರ್ಣಯ:** ವಿಶ್ವವಿದ್ಯಾನಿಲಯದಿಂದ ದಿನಾಂಕ 12.05.2025ರಂದು ಕೊಣಾಜೆ ಗ್ರಾಮ ಪಂಚಾಯತ್‌ಗೆ ಪತ್ರ ಬರೆಯಲಾಗಿದ್ದು ಈ ಪತ್ರಕ್ಕೆ ಸ್ಪಷ್ಟೀಕರಣ ಸ್ವೀಕೃತವಾದ ನಂತರ ಮುಂದಿನ ಕ್ರಮ ಕೈಗೊಳ್ಳಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.4:6(2025)

ವಿಷಯ: ಶ್ರೀ ರಘುರಾಜ್ ಕೆ., ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ**.**

ವಿಷಯ : 2018 ರಿಂದ 2023ರವರೆಗೆ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ಮತ್ತು ಹೊರಗುತ್ತಿಗೆ ಆಧಾರದಲ್ಲಿ ಲಭ್ಯವಿದ್ದ ಹುದ್ದೆಗಳ ಸಂಖ್ಯೆ ಮೀರಿ ನೇಮಕ ಮಾಡಲಾದ ಹೆಚ್ಚುವರಿ ಸಿಬ್ಬಂದಿಗಳ ಸಂಖ್ಯೆಯ ವಿವರ ಮತ್ತು ಇದರಿಂದ ವಿಶ್ವವಿದ್ಯಾನಿಲಯಕ್ಕೆ ಆಗಿರುವ ನಷ್ಟದ ಮೊತ್ತವನ್ನು ಸಿಂಡಿಕೇಟ್ ಸಭೆಯಲ್ಲಿ ಮಂಡಿಸಿ ಚರ್ಚೆ ನಡೆಸುವುದು. ಈ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ವಿಶ್ವವಿದ್ಯಾನಿಲಯಕ್ಕೆ ನೀಡಲ್ಪಟ್ಟ ನಿರ್ದೇಶನದ ವಿವರ ಮತ್ತು ವಿಶ್ವವಿದ್ಯಾನಿಲಯ ಈ ಬಗ್ಗೆ ಕೈಗೊಂಡ ಕ್ರಮ.

**ನಿರ್ಣಯ:** 2018 ರಿಂದ 2023ರವರೆಗೆ ಮಂಜೂರಾದ ಹುದ್ದೆಗಳಿಗಿಂತ ಸುಮಾರು 350ಕ್ಕೂ ಹೆಚ್ಚು ಸಿಬ್ಬಂದಿಗಳನ್ನು ಹೆಚ್ಚುವರಿಯಾಗಿ ನೇಮಕ ಮಾಡಿಕೊಂಡ ಕಾರಣದಿಂದ ವಿಶ್ವವಿದ್ಯಾನಿಲಯಕ್ಕೆ ಸುಮಾರು ರೂ. 26 ಕೋಟಿಗೂ ಹೆಚ್ಚು ಅನಗತ್ಯ ಖರ್ಚು ಬಂದಿರುತ್ತದೆ. ಮಂಜೂರಾದ ಹುದ್ದೆಗಳಿಗಿಂತ ಹೆಚ್ಚಾಗಿ ತಾತ್ಕಾಲಿಕ / ಹೊರಗುತ್ತಿಗೆ ಸಿಬ್ಬಂದಿಗಳ ನೇಮಕಾತಿ ಮಾಡಿದ ವಿವರ, ಸಿಂಡಿಕೇಟ್‌ನಲ್ಲಿ ಈ ಬಗ್ಗೆ ಅನುಮೋದನೆ ಪಡೆದುಕೊಳ್ಳಲಾಗಿದೆಯೇ ಅಥವಾ ಸರ್ಕಾರದ ಅನುಮತಿ ಪಡೆಯಲಾಗಿದೆಯೇ ಹಾಗೂ ಸರ್ಕಾರದಿಂದ ಈ ಸಂಬಂಧ ಸ್ವೀಕೃತವಾದ ಯಾವುದೇ ನಿರ್ದೇಶನದ ವಿವರ ಇತ್ಯಾದಿ ಪೂರ್ಣ ವಿವರಗಳೊಂದಿಗೆ ಮುಂದಿನ ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು: ಸಾ.ಸ.4:7(2025) |
| ವಿಷಯ: | ಡಾ.ಎಸ್.ಬಿ.ಎಂ.ಪ್ರಸನ್ನ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1 : | ಕುಲಪತಿಗಳ ನೇಮಕಾತಿಗಾಗಿ ರಾಜ್ಯದ ಹಾಗೂ ಕೇಂದ್ರದ ಹಲವು ವಿಶ್ವವಿದ್ಯಾನಿಲಯಗಳು ಅರ್ಜಿ ಕರೆಯುವುದು ಸರಿಯಷ್ಟೆ. ಅದಕ್ಕೆ ಸಂಬಂಧಪಟ್ಟಂತೆ ನಮ್ಮ ಪ್ರತಿಷ್ಠಿತ ವಿಶ್ವವಿದ್ಯಾನಿಲಯದಿಂದ ಹಲವು ಪ್ರಾಧ್ಯಾಪಕರುಗಳು ಅರ್ಜಿ ಸಲ್ಲಿಸುವುದು ಹಾಗೂ ಆಯ್ಕೆ ಆಗುವುದು ಸಂತೋಷಕರ ವಿಷಯ. ಆದರೆ, ಹಾಗೇ ಸಲ್ಲಿಸುವ ಅರ್ಜಿಗಳನ್ನು ಕುಲಸಚಿವರು ಹಾಗೂ ಕುಲಪತಿಗಳು ಪ್ರಾಧ್ಯಾಪಕರುಗಳು ಸಲ್ಲಿಸುವ ಅರ್ಜಿಗಳನ್ನು ಅನುಮೋದಿಸಿ ಹಾಗೂ ಅವರಿಗೆ "ನಿರಾಕ್ಷೇಪಣ ಪತ್ರ" ಕೊಡುವುದು ಸರಿಯಷ್ಟೆ. ಆದರೆ, ನಮ್ಮ ಪ್ರತಿಷ್ಠಿತ ವಿಶ್ವವಿದ್ಯಾನಿಲಯದಲ್ಲಿ ಕೆಲವು ಪ್ರಾಧ್ಯಾಪಕರುಗಳ ಮೇಲೆ ಇರುವ ಆರೋಪಗಳು, ಇಲಾಖಾ ವಿಚಾರಣೆಗಳು ಹಾಗೂ ಲೋಕಾಯುಕ್ತ ಪ್ರಕರಣಗಳ ಬಗ್ಗೆ ಸಿಂಡಿಕೇಟ್ ಸಭೆಗೆ ಮಾಹಿತಿಯನ್ನು ಒದಗಿಸುವುದು ಹಾಗೂ ಚರ್ಚಿಸುವುದು. |
| **ನಿರ್ಣಯ:** | ಮಾನ್ಯ ಸದಸ್ಯರು ಕೋರಿರುವ ಸ್ಪಷ್ಟೀಕರಣದಂತೆ, ಎಲ್ಲಾ ಅರ್ಜಿದಾರರ ಸೇವಾ ಪುಸ್ತಕದ ಆಧಾರದ ಮೇಲೆ ನಿರಾಕ್ಷೇಪಣಾ ಪತ್ರವನ್ನು ಸರ್ಕಾರಕ್ಕೆ ನೀಡಲಾಗಿದೆ ಎಂಬ ವಿಷಯವನ್ನು ಸಿಂಡಿಕೇಟಿನ ಗಮನಕ್ಕೆ ತರಲಾಯಿತು. |
| ವಿಷಯ 3 : | 2025ರ ಘಟಿಕೋತ್ಸವವನ್ನು ಯಶಸ್ವಿಯಾಗಿ ನಡೆಸಿದ ಕುಲಪತಿಗಳು ಹಾಗೂ ಕುಲಸಚಿವರು ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಅಭಿನಂದನೆ ಸಲ್ಲಿಸುತ್ತಾ ಘಟಿಕೋತ್ಸವಕ್ಕೆ ಆದ ಖರ್ಚು ವೆಚ್ಚಗಳನ್ನು ಸಿಂಡಿಕೇಟ್ ಸಭೆಯಲ್ಲಿ ಮಂಡಿಸುವುದು. |
| **ನಿರ್ಣಯ:** | ಘಟಿಕೋತ್ಸವದ ಖರ್ಚು ವೆಚ್ಚದ ವಿವರಗಳನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |
| ವಿಷಯ 4 : | ದಿನಾಂಕ 25.05.2023ರಂದು ನಡೆದ ತೃತೀಯ ಸಾಮಾನ್ಯ ಸಭೆಯಲ್ಲಿ ಇತರೆ ವಿಷಯಗಳ ಕ್ರ.ಸಂ.-9 ರಲ್ಲಿ ಡಾ. ಸಿದ್ಧಲಿಂಗಸ್ವಾಮಿ ಕೆ.ಪಿ, Research Associate, Centre for the Study of Social Exclusion & Inclusive Policy (CSSEIP) ಮಂಗಳೂರು ವಿಶ್ವವಿದ್ಯಾನಿಲಯ ಇವರು ವೇತನ ಹೆಚ್ಚಿಸುವಂತೆ ಸಲ್ಲಿಸಿರುವ ಮನವಿಯನ್ನು ಪರಿಗಣಿಸಿಕೊಂಡು ನಿಯಮಾನುಸಾರ ಸೂಕ್ತ |

| | |
|---|---|
| | ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟ್ ನಿರ್ಣಯಿಸಲಾಗಿತ್ತು. ಆದರೆ, ಇದುವರೆವಿಗೂ ಈ ವಿಷಯವಾಗಿ ಯಾವುದೇ ಕ್ರಮಕೈಗೊಂಡಿರುವುದಿಲ್ಲ. ಹಾಗಾಗಿ ಈಗ ಮತ್ತೊಮ್ಮೆ ಈ ವಿಷಯವನ್ನು ಚರ್ಚಿಸಿ ನಿರ್ಧಾರ ಕೈಗೊಂಡು Centre for the Study of Social Exclusion & Inclusive Policy (CSSEIP) ಕೆಲಸಗಳಿಗೆ ಪೂರಕವಾಗುವಂತೆ ಸಹಕಾರ ನೀಡುವುದು. |
| **ನಿರ್ಣಯ:** | 12th Plan ಅಡಿಯಲ್ಲಿ ಡಾ. ಸಿದ್ಧಲಿಂಗಸ್ವಾಮಿ ಕೆ.ಪಿ. ಇವರ ವೇತನ ಪರಿಷ್ಕರಿಸಲು ಕ್ರಮ ವಹಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು: ಸಾ.ಸ.4:8(2025) |
| ವಿಷಯ: | ಶ್ರೀ ಸುರೇಶ್ ಬಿ. ನಾವೂರು, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1 : | ಇತ್ತೀಚೆಗೆ ನಡೆದ ಘಟಿಕೋತ್ಸವ ಸಮಾರಂಭದಲ್ಲಿ ಜರುಗಿದ ಡಾಕ್ಟರೇಟ್ ಪದವಿ ಪ್ರದಾನ ಕಾರ್ಯಕ್ರಮದ ಬಗ್ಗೆ ವಿಶ್ವವಿದ್ಯಾನಿಲಯದ ಘನತೆ, ಗೌರವಕ್ಕೆ ಧಕ್ಕೆ ಬರುವ ರೀತಿಯಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಬಿತ್ತರವಾದ ಬಗ್ಗೆ ಹಾಗೂ ಸಾರ್ವಜನಿಕವಾಗಿ ಅಪಸ್ವರಗಳು ಬಂದ ಬಗ್ಗೆ ಗಂಭೀರವಾಗಿ ಪರಿಗಣಿಸುವುದು. ಈ ಬಗ್ಗೆ ಚರ್ಚಿಸುವುದು. |
| **ನಿರ್ಣಯ:** | ಚರ್ಚಿಸಲಾಯಿತು.ಗೌರವ ಡಾಕ್ಟರೇಟ್ ಪದವಿ ಪ್ರಧಾನದ ಬಗ್ಗೆ ಇನ್ನು ಮುಂದೆ ಕರ್ನಾಟಕ ವಿಶ್ವವಿದ್ಯಾನಿಲಯ ಕಾಯ್ದೆ 2000 ಸೆಕ್ಷನ್ 69 ರ ಪ್ರಕಾರ ಕ್ರಮವಹಿಸಲು ನಿರ್ಣಯಿಸಲಾಯಿತು. |
| ವಿಷಯ 2 : | ವಿಶ್ವವಿದ್ಯಾನಿಲಯದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹಾಗೂ ಇನ್ನಿತರ ಅನುದಾನಗಳನ್ನು ಬಳಸಿ ಕೈಗೊಳ್ಳಲಾಗುವ ಕಾಮಗಾರಿಗಳ ಪ್ರಗತಿ ಪರಿಶೀಲನೆ ಮಾಡಲು ಮತ್ತು ಈ ಮೊದಲು ನಡೆದಿರುವ ಹಲವಾರು ಅವ್ಯವಹಾರಗಳು ಮಾಧ್ಯಮಗಳಲ್ಲಿ ಇತ್ತೀಚೆಗೆ ಸುದ್ದಿಯಾಗುತ್ತಿದ್ದು, ಇದನ್ನು ತಡೆಗಟ್ಟಲು ಸಿಂಡಿಕೇಟ್‌ನಲ್ಲಿ ಕಾಮಗಾರಿಗಳ ವೀಕ್ಷಣೆಗೆ ಸಮಿತಿ ರಚಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |
| ವಿಷಯ 3 : | ವಿಶ್ವವಿದ್ಯಾನಿಲಯದಲ್ಲಿ ಈ ಮೊದಲು ಹಣಕಾಸು ಅವ್ಯವಹಾರ ನಡೆಸಿರುವ ಕೆಲವೊಂದು ವಿಶ್ವವಿದ್ಯಾನಿಲಯದ ಆಡಳಿತಾತ್ಮಕ ಮುಖ್ಯಸ್ಥರುಗಳ ಬಗ್ಗೆ |

ಈವರೆಗೂ ಯಾವುದು ಕ್ರಮ ಕೈಗೊಳ್ಳದೆ ಇದ್ದು, ಈ ಬಗ್ಗೆ ಸಾರ್ವಜನಿಕವಾಗಿ ವ್ಯಾಪಕ ಟೀಕೆಗಳು ವ್ಯಕ್ತವಾಗುತ್ತಿದ್ದು, ಈ ಬಗ್ಗೆ ಸೂಕ್ತ ಕಾರಣಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮಕೈಗೊಳ್ಳುವುದು.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ವಿಷಯ 4 : ಸರಕಾರದಿಂದ ಇತ್ತೀಚೆಗೆ ಬಂದಿರುವ ಅನುದಾನದಿಂದ ಪಿಂಚಣಿ ನೀಡಲಾಗಿರುವ ಪ್ರಾಧ್ಯಾಪಕರುಗಳ ವಿವರ ಮತ್ತು ನೀಡಲಾಗಿರುವ ಪಿಂಚಣಿ ಮೊತ್ತ.

**ನಿರ್ಣಯ:** ವಿವರಗಳನ್ನು ನೀಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.4:9(2025)

ವಿಷಯ: ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿನ ಬೋಧಕರಾದ ಡಾ.ರಾಜೇಂದ್ರ ಆರ್., ಡಾ. ಬಿಷ್ಟಪ್ಪ ಹನುಮಂತಪ್ಪ ತಳವಾರ್, ಮೇಜರ್ ಡಾ. ರಾಘವ ಬಿ. ಹಾಗೂ ಡಾ. ಇ.ತಿಪ್ಪೇಸ್ವಾಮಿ, ಇವರುಗಳು ಮಂಗಳೂರು ವಿಶ್ವವಿದ್ಯಾನಿಲಯ / ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ವರ್ಗಾವಣೆ ಕೋರಿ ಸಲ್ಲಿಸಿರುವ ಮನವಿಯ ಬಗ್ಗೆ.

**ನಿರ್ಣಯ:** ಸದರಿಯವರ ಸೇವೆಯು ಮಂಗಳೂರು ವಿಶ್ವವಿದ್ಯಾನಿಲಯ ಕಾಲೇಜಿಗೆ ಅಗತ್ಯವಿರುವ ಹಿನ್ನೆಲೆಯಲ್ಲಿ ಸಿಂಡಿಕೇಟು ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ವರ್ಗಾಯಿಸಲು ನಿರ್ಣಯಿಸಿ ಈ ಬಗ್ಗೆ ಸರ್ಕಾರಕ್ಕೆ ಪತ್ರ ಬರೆಯಲು ತೀರ್ಮಾನಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.4:10(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕೇತರ ವೃಂದ ಮತ್ತು ನೇಮಕಾತಿ ನಿಯಮಗಳ ಕ್ರೋಢೀಕೃತ ಪರಿಷ್ಕೃತ ಪರಿನಿಯಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಅನುಬಂಧಗಳಲ್ಲಿ ಲಗತ್ತಿಸಿರುವ ಮೂರು ಕರಡು ಪರಿನಿಯಮಗಳಲ್ಲಿ ಅನುಬಂಧ-1ರಲ್ಲಿನ ಕರಡು ಪರಿನಿಯಮದ ಕ್ರಮ ಸಂಖ್ಯೆ 12 (Superintendents)ರ ಕಲಂ 9ರ ಕ್ರಮ ಸಂಖ್ಯೆ (i) ರಲ್ಲಿ "Must have put in a continuous service of not less than 2 years as Senior Assistants" ಎಂಬ ತಿದ್ದುಪಡಿಯನ್ನು ಅಳವಡಿಸಿಕೊಳ್ಳಲು ನಿರ್ಣಯಿಸಲಾಯಿತು. ಉಳಿದಂತೆ, ಎಲ್ಲಾ ಕರಡು ಪರಿನಿಯಮಗಳನ್ನು ಅನುಮೋದಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.4:11(2025) |
| ವಿಷಯ: | ಸ್ವಾಯತ್ತ ಕಾಲೇಜುಗಳ ವಾರ್ಷಿಕ ಪುನರ್ ಪರಿಶೀಲನೆ ಮತ್ತು ಮೌಲ್ಯಮಾಪನದ ಘಟನೋತ್ತರ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪೂರ್ಣ ಮಾಹಿತಿಯೊಂದಿಗೆ ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ:ಸಾ.ಸ.4:12(2025) |
| ವಿಷಯ: | IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಎಪ್ರಿಲ್ 2025ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ. |
| **ನಿರ್ಣಯ:** | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.4:13(2025) |
| ವಿಷಯ: | ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿನಿಂದ ಓರ್ವ ಸದಸ್ಯರನ್ನು ನಾಮನಿರ್ದೇಶನ ಮಾಡುವ ಬಗ್ಗೆ. |
| **ನಿರ್ಣಯ:** | ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ರಘುರಾಜ್ ಇವರನ್ನು ನಾಮನಿರ್ದೇಶನ ಮಾಡಲು ನಿರ್ಣಯಿಸಲಾಯಿತು |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.4:14(2025) |
| ವಿಷಯ: | ಶ್ರೀ ಕೆ.ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1 : | ಮಂಗಳೂರು ವಿಶ್ವವಿದ್ಯಾನಿಲಯದ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಇಲ್ಲದೆ, ಫಲಾನುಭವಿಗಳಿಗೆ ಅಲ್ಪ ಸ್ವಲ್ಪ ಔಷಧಿ ಇರುವುದರಿಂದ ಬಹಳಷ್ಟು ವಿದ್ಯಾರ್ಥಿಗಳಿಗೆ, ಸಿಬ್ಬಂದಿಗಳಿಗೆ ತೊಂದರೆಗಳಾಗುತ್ತಿರುವುದು ಕಂಡುಬಂದಿರುತ್ತದೆ. ಆರೋಗ್ಯ ಕೇಂದ್ರಕ್ಕೆ ತಾತ್ಕಾಲಿಕ ನೆಲೆಯಲ್ಲಿಯಾದರು ವೈದ್ಯಾಧಿಕಾರಿಗಳನ್ನು ನೇಮಕ ಮಾಡಬೇಕು ಅಥವಾ ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿರುವ ಕಣಚೂರು ವೈದ್ಯಕೀಯ ಕಾಲೇಜು, ಫಾದರ್ ಮುಲ್ಲರ್ ವೈದ್ಯಕೀಯ ಕಾಲೇಜು, ನಿಟ್ಟೆ ವೈದ್ಯಕೀಯ ಕಾಲೇಜು ಹಾಗೂ ಯೆನಪೋಯ ವೈದ್ಯಕೀಯ ಕಾಲೇಜುಗಳ ಸಮುದಾಯ ಅಭಿವೃದ್ಧಿ ಯೋಜನೆಯಲ್ಲಿ ನಮ್ಮ |

ಕ್ಯಾಂಪಸ್‌ನ ಆರೋಗ್ಯ ಕೇಂದ್ರದಲ್ಲಿ ಒಂದೊಂದು ದಿನ ಒಂದೊಂದು ವೈದ್ಯಕೀಯ ಕಾಲೇಜಿನ ವೈದ್ಯರನ್ನು ಬರಮಾಡಿ ವೈದ್ಯಕೀಯ ಸೌಲಭ್ಯವನ್ನು ಒದಗಿಸುವ ಬಗ್ಗೆ ಸಂಬಂಧಪಟ್ಟ ವೈದ್ಯಕೀಯ ಕಾಲೇಜುಗಳನ್ನು ಸಂಪರ್ಕಿಸಬೇಕಾಗಿ ಕೋರಿಕೆ ಪ್ರಸ್ತಾವನೆ

**ನಿರ್ಣಯ:** ವಿಶ್ವವಿದ್ಯಾನಿಲಯದ ಆರೋಗ್ಯ ಕೇಂದ್ರದಲ್ಲಿ ಕಣಚೂರು ವೈದ್ಯಕೀಯ ಕಾಲೇಜಿನ ವೈದ್ಯರು ಸೇವೆಯನ್ನು ನೀಡುತ್ತಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

ವಿಷಯ 2 : ವಿ.ವಿ. ಕ್ಯಾಂಪಸ್‌ನಲ್ಲಿರುವ ಸೋಲಾರ್ ದೀಪಗಳು ಕೆಟ್ಟು ಹೋಗಿ ಅನೇಕ ಸಮಯಗಳಿಂದ ರಿಪೇರಿಯಾಗಿಲ್ಲ ಹಾಗೂ ಗಣೇಶ್ ಮಹಲ್‌ನಿಂದ ವಿ.ವಿ. ಮಂಗಳ ಸಭಾಂಗಣದವರೆಗೆ ಲೋಕೋಪಯೋಗಿ ರಸ್ತೆಯ ಬದಿಯಲ್ಲಿ ಯಾವುದೇ ವಿದ್ಯುತ್ ದೀಪ ಇಲ್ಲದಿರುವುದರಿಂದ ವಿ.ವಿ. ವತಿಯಿಂದ ಕೂಡಲೇ ವಿದ್ಯುತ್ ದೀಪದ ವ್ಯವಸ್ಥೆ ಮಾಡಬೇಕಾಗಿ ಪ್ರಸ್ತಾವನೆಗಳು.

**ನಿರ್ಣಯ:** ಪಂಚಾಯತ್ ವತಿಯಿಂದ ವಿದ್ಯುತ್ ದೀಪವನ್ನು ಒದಗಿಸುವಂತೆ ಮತ್ತೊಮ್ಮೆ ಕೋರುವಂತೆ ನಿರ್ಣಯಿಸಲಾಯಿತು.

ವಿಷಯ : ವಿ.ವಿ. ಆವರಣದಲ್ಲಿ ಗೇರು ತೋಟ ಹಾಗೂ ತೆಂಗಿನ ತೋಟದಿಂದ ಬಹಳಷ್ಟು ಉತ್ಪತ್ತಿ ಬರುತ್ತಿತ್ತು. ಸುಂದರ ವಿ.ವಿ. ಕ್ಯಾಂಪಸ್ ಕೂಡಾ ಆಗಿತ್ತು. ಪ್ರಸ್ತುತ ವಿ.ವಿ. ಆವರಣದಲ್ಲಿ ಪುರುಷರ ವಸತಿಗೃಹ, ಯಕ್ಷಗಾನ ಅಧ್ಯಯನ ಕೇಂದ್ರ, ಅರ್ಧದಲ್ಲಿರುವ ವಿದೇಶಿ ವಿದ್ಯಾರ್ಥಿಗಳ ಹಾಸ್ಟೆಲ್ ಬಳಿ ಹಾಗೂ ಪ್ರಥಮ ದರ್ಜೆ ಕಾಲೇಜುಗಳ ಆವರಣದಲ್ಲಿ ಪೊದೆಗಳು ಹಾಗೂ ಉಪಯೋಗವಿಲ್ಲದ ಮರಗಳು ಬೆಳೆದಿರುವುದರಿಂದ ಆವರಣ ಕಾಡಿನಂತೆ ಇರುವುದರಿಂದ, ಪೊದೆಗಳನ್ನು ಶೀಘ್ರವಾಗಿ ತೆಗೆದು ಸ್ವಚ್ಛಗೊಳಿಸಿ ಗೇರು ಅಭಿವೃದ್ಧಿ ನಿಗಮ, ತೋಟಗಾರಿಕೆ ಇಲಾಖೆಯಿಂದ ಸ್ವಚ್ಛ ಕ್ಯಾಂಪಸ್ ನಿರ್ಮಾಣಕ್ಕೆ ಫಲಭರಿತ ಗಿಡಗಳನ್ನು ನೆಡುವುದಕ್ಕೆ ಸಂಬಂಧಪಟ್ಟ ಇಲಾಖೆಗಳನ್ನು ಸಂಪರ್ಕಿಸಿ ವ್ಯವಸ್ಥೆ ಮಾಡುವಂತೆ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾವನೆ.

**ನಿರ್ಣಯ:** ರಾಷ್ಟ್ರೀಯ ಸೇವಾ ಯೋಜನೆಯ ವಿದ್ಯಾರ್ಥಿಗಳ ಸಹಕಾರದೊಂದಿಗೆ ಗಿಡಗಳನ್ನು ನೆಟ್ಟಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ: ಸಾ.ಸ.4:15(2025)

ವಿಷಯ: ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಸ್ನಾತಕೋತ್ತರ ಕಾರ್ಯಕ್ರಮಗಳ ಪ್ರವೇಶಾತಿ ಶುಲ್ಕಗಳನ್ನು ಪರಿಷ್ಕರಿಸಿ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.4:16(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.4:17(2025)

ವಿಷಯ: NMR ಕೇಂದ್ರದ ಪ್ರಯೋಗಾಲಯಕ್ಕೆ ಒಂದು ವರ್ಷಕ್ಕೆ ಅಗತ್ಯವಿರುವ ರಾಸಾಯನಿಕಗಳ ಖರೀದಿ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:18(2025)

ವಿಷಯ: ಎಂ.ಎಸ್ಸಿ. ಬಯೋಟೆಕ್ನೋಲೋಜಿ ಪ್ರೋಗ್ರಾಂಗೆ ಅಗತ್ಯವಿರುವ ರಾಸಾಯನಿಕಗಳು / ಗ್ಲಾಸ್‌ವೇರ್ ಉಪಯೋಗಿ ವಸ್ತುಗಳನ್ನು ಖರೀದಿ ಪ್ರಸ್ತಾವನೆಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:19(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಭೌತಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ GM Counting Systems ಉಪಕರಣವನ್ನು ಅಭಿವೃದ್ಧಿ ಅನುದಾನದಡಿ ಖರೀದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:20(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸೂಕ್ಷ್ಮಾಣು ಜೀವ ವಿಜ್ಞಾನ ಪ್ರೋಗ್ರಾಂ, ಜೀವ ವಿಜ್ಞಾನ ವಿಭಾಗಕ್ಕೆ ಅಗತ್ಯವಿರುವ UV-Visible Spectrophotometer ಉಪಕರಣವನ್ನು ಅಭಿವೃದ್ಧಿ ಅನುದಾನದಡಿ ಖರೀದಿಸಲು ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:21(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ Electronic Weighing Balance ಉಪಕರಣವನ್ನು ಅಭಿವೃದ್ಧಿ ಅನುದಾನದಡಿ ಖರೀದಿಸಲು ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:22(2025)

ವಿಷಯ: ಅನ್ವಯಿಕ ಸಸ್ಯಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ ರಾಸಾಯನಿಕಗಳು / ಗ್ಲಾಸ್‌ವೇರ್/ ಉಪಯೋಗಿ ವಸ್ತುಗಳ ಖರೀದಿ ಪ್ರಸ್ತಾವನೆಯ ಅನುಮೋದನೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:23(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ಹಾಗೂ ಕ್ರೀಡೆಯ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಕ್ಕೆ ಅಗತ್ಯವಿರುವ March Past Band Set ನ್ನು ಅಭಿವೃದ್ಧಿ ಅನುದಾನದಡಿ ಖರೀದಿಸಲು ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:24(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವೈದ್ಯಕೀಯ ಭೌತಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ ಯುಪಿಎಸ್ ಬ್ಯಾಟರಿಗಳನ್ನು ವಿನಿಮಯದೊಂದಿಗೆ ಅಭಿವೃದ್ಧಿ ಅನುದಾನದಡಿ ಖರೀದಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:25(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ, ವಿವಿಧ ವಿಭಾಗ/ಕೋರ್ಸು ಮತ್ತು ಕಚೇರಿಗಳಿಗೆ ಇಂಟರ್‌ನೆಟ್ ಸಂಪರ್ಕ ಕಲ್ಪಿಸಲು ಬೇಕಾಗಿರುವ UTP/OFC Networking ಐಟಂಗಳನ್ನು ಧಾರಣಾ ಗುತ್ತಿಗೆ ದರದಲ್ಲಿ ಖರೀದಿಸುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:26 (2025)

ವಿಷಯ: BRNS Research Project, CARER ಕೇಂದ್ರ – UV Vis Spectrophotometer ಉಪಕರಣ ಖರೀದಿಗೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:27(2025)

ವಿಷಯ: CARER ಕೇಂದ್ರದಲ್ಲಿರುವ HPGe Gamma Spectrometer ಡಿಟೆಕ್ಟರ್‌ಗಳಿಗೆ ಬೇಕಾಗುವ ಲಿಕ್ವಿಡ್ ನೈಟ್ರೋಜನ್ ಖರೀದಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:28(2025)

ವಿಷಯ: VGST GRD ಪ್ರಾಜೆಕ್ಟ್, ಗಣಕವಿಜ್ಞಾನ ವಿಭಾಗ- ಪ್ರಾಜೆಕ್ಟ್‌ಗೆ ಅಗತ್ಯವಿರುವ Server, Workstations ಗಳನ್ನು ಖರೀದಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:29(2025)

ವಿಷಯ: NPCIL Consultancy Research Project - ಬಾಡಿಗೆ ವಾಹನಗಳನ್ನು ನಿರ್ವಹಿಸುವ ಪ್ರಸ್ತಾವನೆಗೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:30(2025)

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ರೂಸಾ ಅನುದಾನದಿಂದ - UV - VIS Scanning Spectrophotometer ಉಪಕರಣ ಖರೀದಿ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.4:31(2025)

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ರೂಸಾ ಅನುದಾನದಿಂದ - L.C.D. Projector (with accessories) ಉಪಕರಣ ಖರೀದಿ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ: ಸಾ.ಸ.4:32(2025)

ವಿಷಯ: RUSA 2.0 Component 9 ಯೋಜನೆಯಡಿ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ಮಂಜೂರಾದ ಅನುದಾನದಿಂದ 02 ಸಂಖ್ಯೆಯ ಜೆರಾಕ್ಸ್ ಯಂತ್ರಗಳನ್ನು ಖರೀದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ: ಸಾ.ಸ.4:33(2025)

ವಿಷಯ: RUSA 2.0 Component 9 ಯೋಜನೆಯಡಿ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ಮಂಜೂರಾದ ಅನುದಾನದಿಂದ ಕಂಪ್ಯೂಟರ್ ಮತ್ತು ಪ್ರಿಂಟರ್‌ಗಳನ್ನು ಖರೀದಿಸುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ: ಸಾ.ಸ.4:34(2025)

ವಿಷಯ: 2024-25ನೇ ಸಾಲಿನ ಸರಕಾರದ ಅಭಿವೃದ್ಧಿ ಅನುದಾನದಡಿ ಮಂಗಳೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ ಪೀಠೋಪಕರಣ ಖರೀದಿಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:35(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಜೀವವಿಜ್ಞಾನ ವಿಭಾಗದ ಸೂಕ್ಷ್ಮಾಣು ಜೀವವಿಜ್ಞಾನ ಕಾರ್ಯಕ್ರಮಕ್ಕೆ Biosafety Cabinet ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:36(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ವಿಭಾಗಕ್ಕೆ ICE Making Machineನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:37(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಜೀವರಸಾಯನಶಾಸ್ತ್ರ ಕಾರ್ಯಕ್ರಮಕ್ಕೆ Miliporemilique water purification systemನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:38(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಕಾರ್ಯಕಾರಿ ಅಭಿಯಂತರರು ಕಛೇರಿಯಿಂದ Drinking Water Facilities for all blocksಗೆ ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:39(2025)

ವಿಷಯ: ಪಿಎಂ-ಉಷಾ ಯೋಜನೆಯ ಅನುದಾನದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಕಛೇರಿ/ವಿಭಾಗಗಳಿಗೆ Computer Table ಮತ್ತು Computer Chair ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:40(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ವಿಭಾಗಕ್ಕೆ Digital Polari Meter ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:41(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಎಸ್‌ವಿಪಿ ಕನ್ನಡ ಅಧ್ಯಯನ ಸಂಸ್ಥೆಗೆ Digital Still Camera ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ: ಸಾ.ಸ.4:42(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಜೀವವಿಜ್ಞಾನ ವಿಭಾಗಕ್ಕೆ ELECTROPHORESIS UNIT ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಪಿಎಂಇಬಿ: ಸಾ.ಸ.4:43(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಸಾಗರ ಭೂ ವಿಜ್ಞಾನ ವಿಭಾಗಕ್ಕೆ ಅಗತ್ಯವಿರುವ Computer to run ERADAS and ArcGIS Software ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಪಿಎಂಇಬಿ: ಸಾ.ಸ.4:44(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳ ಸಭಾಂಗಣಕ್ಕೆ 250KVA DIESET GENERATOR ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸಲು ಅನುಮೋದನೆ ನೀಡುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು: ಸಾ.ಸ.4:45(2025) |
| ವಿಷಯ: | ಡಾ. ಸಂದೇಶ್ ಕೆ.ಎಸ್, ಇವರು ಸಲ್ಲಿಸಿರುವ ಪ್ರಸ್ತಾವನೆ - "Proposal to Adopt Hybrid Mode for Ph.D. Coursework (Excluding Laboratory Subjects) In Compliance with UGC Regulations". |
| **ನಿರ್ಣಯ:** | ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು: ಸಾ.ಸ.4:46(2025) |
| ವಿಷಯ: | ಡಾ.ಎಸ್.ಬಿ.ಎಂ. ಪ್ರಸನ್ನ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1 : | **ದಿನಾಂಕ 09-05-2025ರ ಸಿಂಡಿಕೇಟ್‌ನ ತೃತೀಯ ಸಾಮಾನ್ಯ ಸಭೆಯ ಕಾರ್ಯಸೂಚಿ:** **ಡಿಇವಿ:ಸಾ.ಸ.3:1(2025)**ಗೆ ಸಂಬಂಧಪಟ್ಟಂತೆ ಮಂಗಳೂರು ವಿಶ್ವವಿದ್ಯಾನಿಲಯದ ಜಮೀನಿನಲ್ಲಿ ತಾಲೂಕು ಮಟ್ಟದ ಕಚೇರಿಗಳ ನಿರ್ಮಾಣಕ್ಕೆ ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನ ಸಭೆ ಇವರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ. |
| ನಿರ್ಣಯ: | ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು |

ವಿಷಯ 2 : **ದಿನಾಂಕ 09-05-2025ರ ಸಿಂಡಿಕೇಟ್‌ನ ತೃತೀಯ ಸಾಮಾನ್ಯ ಸಭೆಯ ಕಾರ್ಯಸೂಚಿ:**

**ಡಿಇವಿ:ಸಾ.ಸ.3:2(2025)**ಗೆ ಸಂಬಂಧಪಟ್ಟಂತೆ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸಂಬಂಧಪಟ್ಟ ಸರ್ವೇ ನಂಬ್ರ 113 ರಲ್ಲಿ 2.50 ಎಕರೆ ಜಮೀನನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ಮಂಜೂರು ಮಾಡುವ ಪ್ರಸ್ತಾವನೆ ಬಗ್ಗೆ.

ನಿರ್ಣಯ: ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು

ವಿಷಯ 3 : **ದಿನಾಂಕ 09-05-2025ರ ಸಿಂಡಿಕೇಟ್‌ನ ತೃತೀಯ ಸಾಮಾನ್ಯ ಸಭೆಯ ಕಾರ್ಯಸೂಚಿ:**

**ಡಿಇವಿ:ಸಾ.ಸ.3:3(2025)**ಗೆ ಸಂಬಂಧಪಟ್ಟಂತೆ ಮಂಗಳೂರು ವಿಶ್ವವಿದ್ಯಾನಿಲಯದ ಮಹಿಳಾ ಅತಿಥಿ ಉಪನ್ಯಾಸಕರಿಗೆ ವೇತನ ಸಹಿತ ಮಾತೃತ್ವ ರಜೆ ಸೌಲಭ್ಯ ನೀಡಿರುವ ನಿರ್ಣಯವನ್ನು ಮರುಪರಿಶೀಲಿಸುವ ಬಗ್ಗೆ ಯು.ಜಿ.ಸಿ.ಯಲ್ಲಿ ಇದರ ಬಗ್ಗೆ ಯಾವುದೇ ಪ್ರಸ್ತಾವನೆ ಇಲ್ಲದಿರುವುದರಿಂದ ಸಭೆಯಲ್ಲಿ ಪೂರ್ಣಪ್ರಮಾಣದ ಮಾಹಿತಿಯನ್ನು ನೀಡಿ ಮಾನವೀಯತೆಯ ದೃಷ್ಟಿಯಿಂದ ಈ ಹಿಂದೆ ಗೌರವಾನ್ವಿತ ಸಿಂಡಿಕೇಟ್ ಸದಸ್ಯರು ಕೈಗೊಂಡಿರುವ ನಿರ್ಧಾರವನ್ನು ನಾವು ಗೌರವವಾಗಿ ಯಾವುದೇ ಬದಲಾವಣೆ ಇಲ್ಲದೆ ಮುಂದುವರಿಸಿಕೊಂಡು ಹೋಗುವುದು ಹಾಗೂ ಇದರಿಂದ ಯಾವುದೇ ಆಡಿಟ್ ಆಬ್ಜೆಕ್ಷನ್ ಹಾಗೂ ಯಾವುದೇ ವಿರೋಧಗಳು ಸಹ ಬಂದಿಲ್ಲದಿರುವುದರಿಂದ ನಾವು ಸಹ ಹಿಂದಿನ ನಿರ್ಧಾರವನ್ನು ಗೌರವಿಸೋಣ ಮತ್ತು ಚರ್ಚಿಸೋಣ.

ನಿರ್ಣಯ: ಮಹಿಳಾ ಅತಿಥಿ ಉಪನ್ಯಾಸಕರಿಗೆ ವೇತನ ಸಹಿತ ಮಾತೃತ್ವ ರಜೆ ನೀಡುವ ಬಗ್ಗೆ ಸರ್ಕಾರಕ್ಕೆ ಪತ್ರ ಬರೆಯಲು ನಿರ್ಣಯಿಸಲಾಯಿತು.

ವಿಷಯ 4 : ಮಂಗಳೂರು ವಿಶ್ವವಿದ್ಯಾನಿಲಯದ ಹಂಪನಕಟ್ಟೆ ಘಟಕ ಕಾಲೇಜಿನಲ್ಲಿರುವ ಮೈದಾನವನ್ನು ನಮ್ಮ ವಿದ್ಯಾರ್ಥಿಗಳಿಗೆ ಪೂರ್ಣ ಪ್ರಮಾಣದಲ್ಲಿ ಉಪಯೋಗಿಸಿಕೊಳ್ಳುವುದು ಹಾಗೂ ಯಾರಿಗೂ ಉಪಭೋಗ್ಯ ಮಾಡದೆ, ಬಾಡಿಗೆಗೆ ಕೊಡದೆ, ಈ ಹಿಂದೆ ಯಾವ ಅಧಿಕಾರಿಗಳು ಖಾಸಗಿಯವರಿಗೆ ಬಾಡಿಗೆ ಕೊಟ್ಟು ಅದೇ ಮೈದಾನವನ್ನು ನ್ಯಾಕ್ ಸಮಿತಿಗೂ ಸಹ ತೋರಿಸಿ ವಿಶ್ವವಿದ್ಯಾನಿಲಯಕ್ಕೆ ತಪ್ಪು ಮಾಹಿತಿ ನೀಡಿದ್ದರೆ ಅದನ್ನು ಸಭೆಯಲ್ಲಿ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳುವುದು ನಮ್ಮ ವಿದ್ಯಾರ್ಥಿಗಳ ಹಾಗೂ ಪೋಷಕರ ಭಾವನೆಗಳಿಗೆ ಗೌರವ ಕೊಟ್ಟು ಮಾನ್ಯ ಸಿಂಡಿಕೇಟ್ ಸಭೆಯಲ್ಲಿ ಚರ್ಚಿಸಿ,

| | |
|---|---|
| | ಎನ್.ಎಸ್.ಎಸ್. ವಿದ್ಯಾರ್ಥಿಗಳಿಂದ ಮೈದಾನವನ್ನು ಸ್ವಚ್ಛಗೊಳಿಸಿ, ತಾವು ನ್ಯಾಕ್ ಸಮಿತಿಗೆ ಮೈದಾನವು ಇದೆ ಎಂದು ತೋರಿಸಿರುತ್ತೀರಿ ಎಂದು ಭಾವಿಸಿರುತ್ತೇನೆ. ಇದರ ಪೂರ್ಣ ದಾಖಲಾತಿಗಳನ್ನು ಸಭೆಯಲ್ಲಿ ಇಟ್ಟು ಚರ್ಚಿಸಬೇಕು. |
| ನಿರ್ಣಯ: | ವಿಶ್ವವಿದ್ಯಾನಿಲಯ ಕಾಲೇಜಿನ ವಿದ್ಯಾರ್ಥಿಗಳಿಗಾಗಿಯೇ ಉಪಯೋಗಿಸಲು ನಿರ್ಣಯಿಸಲಾಗಿರುತ್ತದೆ. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಪರೀಕ್ಷಾಂಗ: ಸಾ.ಸ.4:47(2025) |
| ವಿಷಯ: | ಡಿಸೆಂಬರ್ 2024 ಹಾಗೂ ಜನವರಿ/ಫೆಬ್ರವರಿ 2025ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ಸ್ನಾತಕೋತ್ತರ ಪದವಿ ಪರೀಕ್ಷೆಗಳಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯಾರ್ಥಿಗಳ ಬಗ್ಗೆ ತನಿಖಾ ವರದಿ |
| **ನಿರ್ಣಯ:** | ಅನುಮೋದಿಸಲಾಯಿತು. |

**ಇತರೆ ವಿಷಯಗಳು:**

1) ಸಿಂಡಿಕೇಟು ಸಭೆಯ ನಿರ್ಣಯಗಳ ದೃಢೀಕರಣವನ್ನು ಮುಂದಿನ ಸಭೆಗೆ ಮಂಡಿಸದೆ, ಸದರಿ ಸಭೆಯ ದಿನದಂದೇ ನಡವಳಿಯನ್ನು ಅಂತಿಮಗೊಳಿಸಲು ನಿರ್ಣಯಿಸಲಾಯಿತು.

2) ವಿಶ್ವವಿದ್ಯಾನಿಲಯದಿಂದ ನೇಮಕಾತಿಗೊಂಡ ಅತಿಥಿ ಉಪನ್ಯಾಸಕರ ಪಟ್ಟಿ ಹಾಗೂ ಕಾರ್ಯಭಾರದ ಪಟ್ಟಿಯನ್ನು ನೀಡಬೇಕೆಂದು ಹಾಗೂ ವಿಶ್ವವಿದ್ಯಾನಿಲಯ ಹಿತಾಸಕ್ತಿಯ ವಿರುದ್ಧವಾಗಿ ಹಾಗೂ ರಾಜಕೀಯ ಚಟುವಟಿಕೆಗಳಲ್ಲಿ ಭಾಗಿಯಾಗುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸುತ್ತೋಲೆ ಹೊರಡಿಸುವಂತೆ ಸರ್ಕಾರದಿಂದ ನಾಮನಿರ್ದೇಶನಗೊಂಡ ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ಸುರೇಶ್ ಕುಮಾರ್ ನಾವೂರು, ಶ್ರೀ ರಘುರಾಜ್, ಶ್ರೀ ಅಚ್ಚುತ ಗಟ್ಟಿ ಮತ್ತು ಶ್ರೀಮತಿ ಜೂಡಿತ್ ಮೆಂಡೋನ್ಸ ಇವರು ಸಲಹೆ ನೀಡಿದರು.

3) ವಿಶ್ವವಿದ್ಯಾನಿಲಯ ಕೆಲವು ಕಛೇರಿ / ವಿಭಾಗಗಳಲ್ಲಿ ಯಾರೂ ಇಲ್ಲದ ಸಮಯದಲ್ಲಿ ಸಹ ಅನಗತ್ಯವಾಗಿ ಫ್ಯಾನ್ / ಲೈಟ್‌ಗಳನ್ನು ಉರಿಸುತ್ತಿರುವುದರ ಬಗ್ಗೆ ಮಾನ್ಯ ಸಿಂಡಿಕೇಟು ಗಂಭೀರವಾಗಿ ಪರಿಗಣಿಸಿ ಈ ಬಗ್ಗೆ ಸಿಬ್ಬಂದಿಗಳಿಗೆ ವಿದ್ಯುತ್ ಉಳಿತಾಯ ಮಾಡುವ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಸುತ್ತೋಲೆ ಹೊರಡಿಸಲು ನಿರ್ಣಯಿಸಲಾಯಿತು.

4) ಬೋಧಕ / ಬೋಧಕೇತರ ಉದ್ಯೋಗಿಗಳ ಹಾಜರಾತಿಯ ದಾಖಲೆಗೋಸ್ಕರ ಪ್ರತಿ ಕಟ್ಟಡಕ್ಕೆ ಬಯೋಮೆಟ್ರಿಕ್ ಅಳವಡಿಸಲು ಶೀಘ್ರದಲ್ಲಿ ಕ್ರಮ ವಹಿಸಲು ನಿರ್ಣಯಿಸಲಾಯಿತು ಹಾಗೂ ಹಾಜರಾತಿ ಪುಸ್ತಕವನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಮತ್ತೊಮ್ಮೆ ನೆನಪೋಲೆ ಕಳುಹಿಸಲು ನಿರ್ಣಯಿಸಲಾಯಿತು.

5) ಪಿ.ಎಂ. ಉಷಾ ಯೋಜನೆ ಸಂಬಂಧಿಸಿದಂತೆ ಮೂರು ವರ್ಷಗಳಲ್ಲಿ ಅನುಷ್ಠಾನಗೊಳಿಸಲಿರುವ ಕಾಮಗಾರಿ ಮತ್ತಿತರ ವಿವರಗಳ ಬಗ್ಗೆ ನೀಲನಕ್ಷೆಯನ್ನು ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ. ಮಹದೇಶ ಇವರಿಗೆ ನೀಡಲು ನಿರ್ಣಯಿಸಲಾಯಿತು.

6) ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಮತ್ತು ಸರದಿಯ ನೆಲೆಯಲ್ಲಿ ಸಿಂಡಿಕೇಟು ಸದಸ್ಯರಾದ ನಾಮನಿರ್ದೇಶನಗೊಂಡ ಡಾ.ಶಂಕರಮೂರ್ತಿ ಎಚ್.ಕೆ. ಇವರ ಸದಸ್ಯತ್ವದ ಅವಧಿಯು ಪೂರ್ಣಗೊಳ್ಳಲಿರುವ ಹಿನ್ನೆಲೆಯಲ್ಲಿ ಸದರಿಯವರು ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಉನ್ನತಿಗೆ ನೀಡಿದ ಕೊಡುಗೆಯನ್ನು ಸ್ಮರಿಸಿ ಸಿಂಡಿಕೇಟಿನಲ್ಲಿ ಸನ್ಮಾನಿಸಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

**ಕುಲಸಚಿವರು** **ಕುಲಪತಿಯವರು**